# ಉಪತಹಶೀಲ್ದಾರವರ ನ್ಯಾಯಾಲಯ, ಕೋಗಳಿ, ಹ.ಬೊ.ಹಳ್ಳಿ ತಾಲೂಕು.

ಸಂ/ಕಂ/ಪಹಣಿ/ವಿವಾದ/11/2016-17 ದಿನಾಂಕ :22-09-2016.

ಉಪಸ್ಥಿತರು:-ವಿ.ಹೆಚ್.ಮಲ್ಲಿಕಾರ್ಜುನ,
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ, ಕೋಗಳಿ

| ಅರ್ಜಿದಾರರು | ತಕರಾರುದಾರರು |
|---|---|
| 1.ಶ್ರೀ ನಾಗನಾಯ್ಕ ತಂದೆ ಸೋಮ್ಲನಾಯ್ಕ<br>2.ಶ್ರೀ ಎಸ್.ಶಿವಕುಮಾರ ತಂದೆ ಲೇಟ್ ಶಂಕರನಾಯ್ಕ<br>ಗ್ರಾಮ:-ಕೆ.ಕೆ.ತಾಂಡ ತಾಲೂಕು:-ಹ.ಬೊ.ಹಳ್ಳಿ | ಕಂದಾಯ ನಿರೀಕ್ಷಕರು, ಕೋಗಳಿ |

**ವಿವಾದಿತಜಮೀನಿನ ವಿವರ:**

| ಕ್ರ.ಸಂ. | ತಾಲೂಕು | ಗ್ರಾಮದ ಹೆಸರು | ಸ.ನಂ. | ವಿಸ್ತೀರ್ಣ(ಎಕರೆಗಳಲ್ಲಿ) | ತರಹೆ |
|---|---|---|---|---|---|
| 1. | ಹಗರಿಬೊಮ್ಮನಹಳ್ಳಿ | ಕೆ.ಕೋಡಿಹಳ್ಳಿ | 19/ಬಿ/ಬಿ/2 | 0–10 | ಖುಷ್ಕಿ |
| 2. | ” | ” | 69 | 2–44 | ” |

**ಪೀಠಿಕೆ:-**

ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಕೆ.ಕೋಡಿಹಳ್ಳಿ ಗ್ರಾಮದ ವಿವಾದಿತ ಜಮೀನಿಗೆ ಸಂಬಂಧಿಸಿದಂತೆ, ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಕೆ.ಕೆ.ತಾಂಡ ಗ್ರಾಮದ ನಿವಾಸಿಯಾದ 1.ಶ್ರೀ ನಾಗನಾಯ್ಕ ತಂದೆ ಸೋಮ್ಲನಾಯ್ಕ 2.ಶ್ರೀ ಎಸ್.ಶಿವಕುಮಾರ ತಂದೆ ಲೇಟ್ ಶಂಕರನಾಯ್ಕ ಇವರು ವಿಭಾಗ ಪ್ರಕಾರ ಹಕ್ಕು ಬದಲಾವಣೆಯನ್ನು ಮಾಡಲು ದಿನಾಂಕ:22.06.2016 ರಂದು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಗ್ರಾಮದಲ್ಲಿ ನಮೂನೆ-21 ರ ನೋಟೀಸನ್ನು ದಿನಾಂಕ:25.06.2016 ರಂದು ಜಾರಿ ಮಾಡಲಾಗಿ, ನಿಗದಿತ ಅವಧಿಯೊಳಗೆ ಆಕ್ಷೇಪಣೆ ಬಂದಿರುವುದಿಲ್ಲ, ಪಾಲು ವಿಭಾಗ ಪತ್ರಕ್ಕೂ ಚೆಕ್ ಲೀಸ್ಟ್‌ಗೆ ತಾಳೆ ಇಲ್ಲದ ಕಾರಣ, ಎಂ.ಆರ್.ನಂ.75/15-16ರ ಕಡತವು ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಕಂದಾಯ ನಿರೀಕ್ಷಕರು, ಕೋಗಳಿರವರು ಈ ಕಾರ್ಯಾಲಯಕ್ಕೆ ವರದಿ ಸಲ್ಲಿಸಿರುತ್ತಾರೆ. ಅರ್ಜಿದಾರರಿಗೆ ದಿನಾಂಕ:11.08.2016ಕ್ಕೆ ವಿಚಾರಣೆಗೆ ಹಾಜರಾಗಲು ನೋಟೀಸನ್ನು ಜಾರಿ ಮಾಡಲಾಯಿತು.

ಪ್ರಕರಣವನ್ನು ದಿನಾಂಕ:11.08.2016 ರಿಂದ 08.09.2016ರ ವರೆಗೆ ವಿಚಾರಣೆಯನ್ನು ಮಾಡಲಾಯಿತು. ಉಭಯರು ಹಾಜರಾಗಿರುತ್ತಾರೆ. ಅರ್ಜಿದಾರರು(2) ಹೇಳುವಂತೆ; ಸದರಿ ಪ್ರಕರಣದಲ್ಲಿ ಎರಡು ಸರ್ವೆ ನಂಬರ್‌ನ ಜಮೀನುಗಳು ನನ್ನ ಹೆಸರಿಗೆ ಪಾಲು ವಿಭಾಗ ಪ್ರಕಾರ ಬಂದಿರುತ್ತದೆ ಎಂದು ಮೌಖಿಕವಾಗಿ ಹೇಳಿಕೆಯನ್ನು ನೀಡಿರುತ್ತಾರೆ.

ಪ್ರಕರಣದಲ್ಲಿ ಉಭಯ ಪಕ್ಷಕಾರರು ನೀಡಿದ ಹೇಳಿಕೆ ಮತ್ತು ದಾಖಲೆಗಳನ್ನು ಪರಿಶೀಲನೆಮಾಡಲಾಗಿ, ನೋಂದಾಯಿತವಲ್ಲದ ಪಾಲು ವಿಭಾಗ ಪತ್ರಕ್ಕೂ ಮತ್ತು ನಮೂನೆ-21 ಕ್ಕೆ ತಾಳೆ ಇರುವುದಿಲ್ಲ. ಹಾಗೂ ನೋಂದಾಯಿತವಲ್ಲದ ಪಾಲು ವಿಭಾಗ ಪತ್ರದಲ್ಲಿ ಅಸ್ಪಷ್ಟವಾಗಿ

-ಕೈಬರಹ ನಮೂದುಗಳು ಇರುವುದು ಕಂಡುಬಂದಿರುತ್ತದೆ ಕಾರಣ, ಪ್ರಕರಣವನ್ನು ಯಥಾಸ್ಥಿತಿ ಕಾಯ್ದುಕೊಳ್ಳಲು ಈ ಕೆಳಕಂಡಂತೆ ಆದೇಶ;

-:ಆದೇಶ:-

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆ ಮತ್ತು ಕಾರಣಗಳ ಆಧಾರದ ಮೇಲೆ ಎಂ.ಆರ್.ನಂ.75/2016-17ರ ಪ್ರಕರಣದಲ್ಲಿ ಯಥಾಸ್ಥಿತಿ ಕಾಯ್ದುಕೊಳ್ಳಲು ಆದೇಶಿಸಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:22.09.2016 ರಂದು ತೆರದ ನ್ಯಾಯಾಲಯದಲ್ಲಿ ಘೋಷಿಸಿದೆ.

22/9/16

[ವಿ.ಹೆಚ್.ಮಲ್ಲಿಕಾರ್ಜುನ]
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ, ಕೋಗಳಿ

ಉಪ ತಹಸೀಲ್ದಾರ್,
ನಾಡ ಕಛೇರಿ,
ಕೋಗಳಿ.

ಪ್ರತಿಯನ್ನು:-

1. ಅರ್ಜಿದಾರರು ಮತ್ತು ತಕರಾರುದಾರರಿಗೆ.
2. ಭೂಮಿಕೇಂದ್ರ, ತಾಲೂಕು ಕಛೇರಿ, ಹಗರಿಬೊಮ್ಮನಹಳ್ಳಿ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಕಂದಾಯ ನಿರೀಕ್ಷಕರು, ಕೋಗಳಿ.
4. ಶುದ್ಧಪ್ರತಿ ಕಡತಕ್ಕೆ.